# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 18-04-2017 ರಂದು ಬೆಳಿಗ್ಗೆ 11.30 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | - ಅಧ್ಯಕ್ಷರು | ಎಲ್ಲಾ ವಲಯ ಉಪ ಆಯುಕ್ತರರುಗಳು |
| 2. | ಸವಿತಾ ವಿ.ಕೃಷ್ಣ | - ಸದಸ್ಯರು | |
| 3. | ಎನ್.ಉಮಾ | - ಸದಸ್ಯರು | |
| 4. | ರಾಧಮ್ಮ ವೆಂಕಟೇಶ್ | - ಸದಸ್ಯರು | |
| 5. | ಜಿ.ಬಾಲಕೃಷ್ಣನ್ | - ಸದಸ್ಯರು | |
| 6. | ವಿ.ಸುರೇಶ್ | - ಸದಸ್ಯರು | |
| 7. | ಹೆಚ್.ಕುಸುಮಾ | - ಸದಸ್ಯರು | |
| 8. | ಎಂ.ಮಾಲತಿ | - ಸದಸ್ಯರು | |
| 9. | ಎಂ.ಶಾಮಲ | - ಸದಸ್ಯರು | |
| 10. | ಕೆ.ವಿ.ರಾಜೇಂದ್ರಕುಮಾರ್ | - ಸದಸ್ಯರು | |
| 11. | ಎಂ.ಗೌತಮ್ ಕುಮಾರ್ | - ಸದಸ್ಯರು | |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಸಮಿತಿಯ ಸದಸ್ಯರುಗಳಿಗೆ ಮತ್ತು ಅಧಿಕಾರಿ ಸ್ವಾಗತ ಕೋರಿ, ತಮ್ಮ ಪರಿಚಯವನ್ನು ಮಾಡಿಕೊಂಡು ನಂತರ ಸಮಿತಿಯ ಸದಸ್ಯರುಗಳು ಮತ್ತು ಅಧಿಕಾರಿಗಳಿಗೆ ಸಭೆಗೆ ತಮ್ಮ ಪರಿಚಯ ಮಾಡಿಕೊಳ್ಳುವಂತೆ ಕೋರಿದರು. ಅದರಂತೆ, ಹಾಜರಿದ್ದ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ ಸಮಿತಿಯು ಕಳೆದ 6 ತಿಂಗಳುಗಳಿಂದ ಹಲವಾರು ಸಭೆಗಳನ್ನು ನಡೆಸಿ 2006-07ನೇ ಸಾಲಿನಿಂದ 2013-14ನೇ ಸಾಲಿನವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ, ವಸೂಲಾತಿ ಮೊತ್ತ, ಬಾಕಿ ಇರುವ ಕಂಡಿಕೆಗಳು ಹಾಗೂ ಇನ್ನಿತರೆ ವಿಷಯಗಳ ಬಗ್ಗೆ ಚರ್ಚಿಸಿ ಸದರಿ ಸಾಲುಗಳ ಲೆಕ್ಕಪರಿಶೋಧನಾ ವರದಿಗೆ ಸಂಬಂಧಿಸಿದಂತೆ ವಿವರವಾದ ವರದಿಯ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಸೂಚಿಸಲಾಗಿದ್ದರೂ ಇದುವರವಿಗೂ ಯಾವುದೇ ವಲಯದಿಂದ ನಿಖರವಾದ ಮಾಹಿತಿಯು ಸಮತಿಗೆ ಬಂದಿರುವುದಿಲ್ಲವೆಂದು ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಅಧ್ಯಕ್ಷರು ತಿಳಿಸಿದರು.

ನಂತರ ಪೂರ್ವ ವಲಯದ ಉಪ ಆಯುಕ್ತರು ಮಾತನಾಡುತ್ತಾ ಲೆಕ್ಕ ಪರಿಶೋಧನಾ ವರದಿಗಳಿಗೆ ಸಂಬಂಧಿಸಿದಂತೆ ಸಹಾಯಕ ನಿಯಂತ್ರಕರು (ಹಣಕಾಸು) ರವರೊಂದಿಗೆ ಹಾಗೂ ಅಧೀನ ಅಧಿಕಾರಿಗಳ ಸಭೆಗಳನ್ನು ಕರೆದು ಚರ್ಚಿಸಲಾಗಿದ್ದು, ಲೆಕ್ಕಪರಿಶೋಧನಾ ವರದಿಗಳಲ್ಲಿನ ಬಾಕಿ ಇರುವ ಕಂಡಿಕೆ, ಆಕ್ಷೆಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿಗೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸುತ್ತಾ ಪದೇ ಪದೇ ಅಧಿಕಾರಿಗಳನ್ನು ವರ್ಗಾವಣೆ ಮಾಡುತ್ತಿದ್ದು ಇದರಿಂದ ಮೇಲಾಧಿಕಾರಿಗಳಿಂದ ಕೇಳಲ್ಪಡುವ ಮಾಹಿತಿಗಳನ್ನು ಒದಗಿಸಲು ಹಾಗೂ ಕಛೇರಿ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಕಷ್ಟಸಾಧ್ಯವಾಗುತ್ತಿರವುದಾಗಿ ತಿಳಿಸುತ್ತಾ, ಈ ಹಿನ್ನೆಲೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಕೋರಿದಾಗ, ಅಧ್ಯಕ್ಷರು ಈ ಕುರಿತು ಆಯುಕ್ತರವರೊಂದಿಗೆ ಚರ್ಚಿಸುವುದಾಗಿ ತಿಳಿಸಿದರು.

ಅದರಂತೆ ಉಳಿದ ವಲಯಗಳ ಉಪ ಆಯುಕ್ತರರುಗಳು ಸಹ ಈಗಾಗಲೇ ಸಹಾಯಕ ನಿಯಂತ್ರಕರು (ಹಣಕಾಸು) ರವರ ಅಧೀನದಲ್ಲಿ ವಲಯದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಲೆಕ್ಕ ಪರಿಶೋಧನಾ ವರದಿಗಳಲ್ಲಿನ ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ, ವಸೂಲಾತಿ ಮೊತ್ತ, ಬಾಕಿ ಇರುವ ಕಂಡಿಕೆಗಳಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿರುವುದಾಗಿ, ಈ ನಿಟ್ಟಿನಲ್ಲಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ನಂತರ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ಮಾತನಾಡುತ್ತಾ ಎಸ್.ಎ.ಎಸ್.ಯೋಜನೆ ಅಡಿಯಲ್ಲಿ ಎಷ್ಟು ಆಸ್ತಿಗಳು ನೋಂದಾಯಿಸಲ್ಪಟ್ಟಿರುತ್ತದೆ, ಈ ಎಲ್ಲಾ ಆಸ್ತಿಗಳನ್ನು ನಿಯಮಾನುಸಾರ ತಪಾಸಣೆ ಮಾಡಿ ದೃಢೀಕರಿಸಲಾಗಿರುತ್ತದೆಯೇ, ಎಸ್‌ಎಎಸ್ ಯೋಜನೆ ಅಡಿಯಲ್ಲಿ ಎಷ್ಟು ಆಸ್ತಿಗಳ ಮಾಲೀಕರು ತೆರಿಗೆಯನ್ನು ಪಾವತಿಸಿರುತ್ತಾರೆ. ಎಸ್.ಎ.ಎಸ್ ಯೋಜನೆ ಅಡಿಯಲ್ಲಿ ದಾಖಲಾಗಿರುವ ಎಷ್ಟು ಆಸ್ತಿಗಳನ್ನು ತಪಾಸಣೆ ಮಾಡಿ ದೃಢೀಕರಿಸಲಾಗಿರುತ್ತದೆ. ಎಷ್ಟು ಆಸ್ತಿಗಳಿಗೆ ಬಿ ಖಾತಾ ನೀಡಲಾಗಿರುತ್ತದೆ. ಬಿ ಖಾತೆ ಪಡೆದ ಮಾಲೀಕರು ಸದರಿ ಸ್ವತ್ತಿನಲ್ಲಿ ಕಟ್ಟಡ ನಿರ್ಮಾಣ ಮಾಡಿರುತ್ತಾರೆಯೇ, ಸದರಿ ಕಟ್ಟಡಕ್ಕೆ ತೆರಿಗೆಯನ್ನು ನಿಗಧಿಪಡಿಸುವಾಗ ಮಂಜೂರಾತಿ ನಕ್ಷೆ ಪ್ರತಿಯನ್ನು ಪಡೆಯಲಾಗಿರುತ್ತದೆಯೇ. ಈ ಎಲ್ಲಾ ಕಟ್ಟಡಗಳಿಗೆ ಅಭಿವೃದ್ದಿ ಶುಲ್ಕ ಪಾವತಿಸಿಕೊಂಡಿರುವ ಬಗ್ಗೆ ಸಂಪೂರ್ಣ ವಿವರಗಳನ್ನು ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಉಪ ಆಯಕ್ತರರುಗಳು ಎಸ್.ಎ.ಎಸ್ ಯೋಜನೆ ಅಡಿಯಲ್ಲಿ ನೊಂದಾಯಿಸಲ್ಪಟ್ಟಿರುವ ಆಸ್ತಿಗಳ ವಿವರಗಳನ್ನು ಅಂತರ್ಜಾಲದಲ್ಲಿ ಡೌನ್‌ಲೌಡ್ ಮಾಡಿಕೊಳ್ಳುವ ವ್ಯವಸ್ಥೆಯು ಇರುವುದಿಲ್ಲವೆಂದು, ಈ ನಿಟ್ಟಿನಲ್ಲಿ ಪಾಲಿಕೆಯ ತಂತ್ರಜ್ಞಾನ ವಿಭಾಗದವರು ಶೀಘ್ರದಲ್ಲೇ ಸದರಿ ವ್ಯವಸ್ಥೆಯನ್ನು ಅಳವಡಿಸುವುದಾಗಿ ತಿಳಿಸಿರುತ್ತಾರೆಂದು ಮಾಹಿತಿ ನೀಡಿದರು.

ಮುಂದುವರಿದು ಅಧ್ಯಕ್ಷರು ಮಾತನಾಡುತ್ತಾ ನಗರ ಯೋಜನೆ ವಿಭಾಗಗಳಲ್ಲಿ ನಕ್ಷೆ ಮಂಜೂರಾತಿ ನೀಡುವಾಗ ಅಭಿವೃದ್ದಿ ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಪಡೆದು ನಕ್ಷೆ

ಮಂಜೂರಾತಿಯನ್ನು ನೀಡಲಾಗುತ್ತಿದ್ದು, ನಗರ ಯೋಜನೆ ವಿಭಾಗ ಕಛೇರಿಗಳಲ್ಲಿ ಕಟ್ಟಡಗಳ ಮಾಲೀಕರ ವಿವರಗಳು ಲಭ್ಯವಿದ್ದು, ಈ ನಿಟ್ಟಿನಲ್ಲಿ ಕಂದಾಯ ವಿಭಾಗದವರು ನಗರ ಯೋಜನೆ ವಿಭಾಗದ ಕಛೇರಿಯಿಂದ ನಕ್ಷೆ ಮಂಜೂರಾತಿ ನೀಡಿರುವ ಕಡತಗಳ ವಿವರಗಳನ್ನು ಪಡೆದುಕೊಂಡು ಅಭಿವೃದ್ಧಿ ಶುಲ್ಕವನ್ನು ವಸೂಲು ಮಾಡಲು ಅಗತ್ಯ ಕ್ರಮ ಕೈಗೊಳ್ಳುವುದು ಅವಶ್ಯಕವಾಗಿದ್ದು, ಈ ನಿಟ್ಟಿನಲ್ಲಿ ನಗರ ಯೋಜನೆ ವಿಭಾಗದ ಅಧಿಕಾರಿಗಳು ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಪರಸ್ಪರ ಚರ್ಚಿಸಿ ಅಭಿವೃದ್ಧಿ ಶುಲ್ಕವನ್ನು ವಸೂಲು ಮಾಡಲು ಕ್ರಮ ಕೈಗೊಳ್ಳಲು ತಿಳಿಸಲಾಯಿತು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ, ಲೆಕ್ಕ ಪರಿಶೋಧನಾ ವರದಿಗಳಲ್ಲಿನ ಬಾಕಿ ಕಂಡಿಕೆಗಳು, ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಕ್ಕೆ ಸಂಬಂಧಿಸಿದಂತೆ, ಅಗತ್ಯ ಕ್ರಮ ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸುತ್ತಾ ಸಭೆಯನ್ನು ವಂದನೆಯೊಂದಿಗೆ ಮುಕ್ತಾಯಗೊಳಿಸಿದರು.

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಎಲ್ಲಾ ವಲಯ ಅಪರ/ಜಂಟಿ ಆಯುಕ್ತರರುಗಳಿಗೆ ಅಗತ್ಯ ಕ್ರಮಕ್ಕಾಗಿ
6.ಎಲ್ಲಾ ವಲಯ ಉಪ ಆಯುಕ್ತರರುಗಳಿಗೆ ಕಳುಹಿಸುತ್ತಾ ಸಭೆಯಲ್ಲಿ ಚರ್ಚಿಸಿದ ವಿಷಯಗಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಂಡು ವರದಿ ಸಲ್ಲಿಸಲು ಸೂಚಿಸಿದೆ.
7.ಕಛೇರಿ ಕಡತಕ್ಕೆ